ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ: 2ನೇ ಹಂತದ ನಗರಗಳಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್‌ಗಳ ಸ್ಥಾಪನೆಗಾಗಿ 2009–10ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾಗಿರುವ ಅನುದಾನದಲ್ಲಿ ರೂ. 5.00 ಕೋಟಿಗಳನ್ನು ಕಿಯೋನಿಕ್ಸ್ ಸಂಸ್ಥೆಗೆ ಇಕ್ವಿಟಿ ಮೊತ್ತವಾಗಿ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ ಐಟಿಡಿ 38 ಎಂಡಿಎ 2008, ದಿನಾಂಕ 25/11/2008.
2) ಸರ್ಕಾರಿ ಆದೇಶ ಸಂಖ್ಯೆ ಐಟಿಡಿ 38 ಎಂಡಿಎ 2008, ದಿನಾಂಕ 25–02–2009
3) ಸರ್ಕಾರಿ ಆದೇಶ ಸಂಖ್ಯೆ ಐಟಿಡಿ 38 ಎಂಡಿಎ 2008, ದಿನಾಂಕ 5–10–2009
4) ವ್ಯವಸ್ಥಾಪಕ ನಿರ್ದೇಶಕರು ಕಿಯೋನಿಕ್ಸ್ ಪತ್ರ ಸಂಖ್ಯೆ ಕೆಎಸ್‌ಇಡಿಸಿ/ಎಫ್ & ಎ/2009–10, ದಿನಾಂಕ 03–10–2009

ಪ್ರಸ್ತಾವನೆ:

2008–09ನೇ ಸಾಲಿನ ಆಯವ್ಯಯ ಭಾಷಣದಲ್ಲಿ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ವಿಭಾಗಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಘೋಷಣೆಯನ್ನು ಮಾಡಲಾಗಿರುತ್ತದೆ.

"ಹುಬ್ಬಳ್ಳಿ–ಧಾರವಾಡ, ಬೆಳಗಾವಿ, ಗುಲ್ಬರ್ಗಾ, ಶಿವಮೊಗ್ಗ, ದಾವಣಗೆರೆ, ಮಂಗಳೂರು ಮುಂತಾದ ನಗರಗಳಲ್ಲಿ ಖಾಸಗಿ ಸಹಭಾಗಿತ್ವದೊಡನೆ ಹಾಗೂ ಸರ್ಕಾರಿ ಸಂಸ್ಥೆಯಾದ ಕೆಐಎಡಿಬಿ ಜೊತೆಗೂಡಿ ಐಟಿಬಿಟಿ ಪಾರ್ಕ್‌ಗಳನ್ನು ಸ್ಥಾಪಿಸಲು ಉದ್ದೇಶಿಸಿದೆ. ಕಿಯೋನಿಕ್ಸ್ ಸಂಸ್ಥೆಯು ಈ ಸಂಬಂಧ ಸೂಕ್ತ ಕ್ರಮಗಳನ್ನು ಆರಂಭಿಸಲಿದ್ದು, ಈ ಉದ್ದೇಶಕ್ಕಾಗಿ 10 ಕೋಟಿ ರೂ.ಗಳ ಬಂಡವಾಳವನ್ನು ಒದಗಿಸಲಾಗಿದೆ".

ಅದರನ್ವಯ 2008–09ನೇ ಸಾಲಿನ ಆಯವ್ಯಯದಲ್ಲಿನ ಲೆಕ್ಕಶೀರ್ಷಿಕೆ **"5465–01–190–1–13 – ಹಂತ 2 ನಗರಗಳ ಸಲುವಾಗಿ ಕಿಯೋನಿಕ್ಸ್‌ನಲ್ಲಿ ಸಾಮ್ಯಷೇರು–ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ–59– ಇತರೆ ಖರ್ಚು [ಯೋಜನೆ]"** ಅಡಿಯಲ್ಲಿ ರೂ. 1000.00 ಲಕ್ಷಗಳ ಒದಗಣೆ ಮಾಡಲಾಗಿತ್ತು. ನಂತರ ಸದರಿ ಒದಗಣೆಯನ್ನು ರೂ.500 ಲಕ್ಷಗಳ ಅನುದಾನಕ್ಕೆ ಪರಿಷ್ಕೃತಗೊಳಿಸಲಾಗಿತ್ತು.

ಮೇಲೆ (2)ರಲ್ಲಿ ಓದಲಾದ ದಿನಾಂಕ – 25–02–2009ರ ಸರ್ಕಾರಿ ಆದೇಶದಲ್ಲಿ 2ನೇ ಹಂತದ ನಗರಗಳಾದಂತಹ ಮಂಗಳೂರು, ಮೈಸೂರು, ಶಿವಮೊಗ್ಗ, ಬೆಳಗಾಂ, ದಾವಣಗೆರೆ ಹಾಗೂ ಹುಬ್ಬಳ್ಳಿ–ಧಾರವಾಡದಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್‌ಗಳ ಸ್ಥಾಪನೆಗಾಗಿ 2008–09ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶಿರ್ಷಿಕೆ "5465–01–190–1–13 ಹಂತ 2 ನಗರಗಳ ಸಲುವಾಗಿ ಕಿಯೋನಿಕ್ಸ್‌ನಲ್ಲಿ ಸಾಮ್ಯ ಷೇರು – ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ – 059–ಇತರೆ ಖರ್ಚು" ಅಡಿಯಲ್ಲಿ ಒದಗಿಸಲಾಗಿರುವ ರೂ 10.00 ಕೋಟಿ ಈಕ್ವಿಟಿ ಅನುದಾನದಲ್ಲಿ ರೂ.5.00 ಕೋಟಿಗಳನ್ನು ಇಕ್ವಿಟಿ ಮೊತ್ತವಾಗಿ ಕಿಯೋನಿಕ್ಸ್ ಸಂಸ್ಥೆಗೆ ಬಿಡುಗಡೆ ಮಾಡಲಾಗಿದೆ.

ಮೇಲೆ (1) ಮತ್ತು (3)ರಲ್ಲಿ ಓದಲಾದ ದಿನಾಂಕ 25–11–2008 ಹಾಗೂ ದಿನಾಂಕ 05–10–2009ರ ಸರ್ಕಾರಿ ಆದೇಶದಲ್ಲಿ ಮೈಸೂರು ಮಂಗಳೂರಿನಲ್ಲಿ ರೂ.31.68 ಕೋಟಿ ಹಾಗೂ ಶಿವಮೊಗ್ಗದಲ್ಲಿ ರೂ 15.46 ಕೋಟಿ ವೆಚ್ಚದಲ್ಲಿ ಐಟಿ ಪಾರ್ಕ್‌ಗಳನ್ನು ಕಿಯೋನಿಕ್ಸ್‌ನ ಸ್ವಂತ ಬಂಡವಾಳ ಹಾಗೂ ಖಾಸಗಿ ಸಹಭಾಗಿತ್ವ ಮಾದರಿಯಲ್ಲಿ (PPP Mode) ನಲ್ಲಿ ಮಾಹಿತಿ ತಂತ್ರಜ್ಞಾನ ಪಾರ್ಕ್‌ಗಳನ್ನು ಸ್ಥಾಪಿಸಲು ಸರ್ಕಾರದ ಅನುಮತಿಯನ್ನು ನೀಡಲಾಗಿದೆ.

ಮೇಲೆ (4) ರಲ್ಲಿ ಓದಲಾದ ಕಿಯೋನಿಕ್ಸ್ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರ ಪತ್ರದಲ್ಲಿ ಈಗಾಗಲೇ ಸರ್ಕಾರದಿಂದ ಅನುಮೋದಿಸಲ್ಪಟ್ಟಿರುವ ಶಿವಮೊಗ್ಗ, ಮಂಗಳೂರು, ಮೈಸೂರು, ಬೆಳಗಾವಿ, ದಾವಣಗೆರೆ ಹಾಗೂ ಹುಬ್ಬಳ್ಳಿ–ಧಾರವಾಡದಲ್ಲಿ ಐಟಿ ಪಾರ್ಕ್ ಸ್ಥಾಪನೆ ಉದ್ದೇಶವನ್ನು ಉಲ್ಲೇಖಿಸಿ, 2009–10ನೇ ಸಾಲಿನ ಲೆಕ್ಕಶೀರ್ಷಿಕೆ "5465–01–190–1–13 ಹಂತ 2 ನಗರಗಳ ಸಲುವಾಗಿ ಕಿಯೋನಿಕ್ಸ್ ನಲ್ಲಿ ಸಾಮ್ಯ ಷೇರು– ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ – 059–ಇತರೆ ಖರ್ಚು (ಯೋಜನೆ)" ಅಡಿಯಲ್ಲಿ ಒದಗಿಸಲಾಗಿರುವ ರೂ.5 ಕೋಟಿಗಳ ಸಾಮ್ಯ ಷೇರನ್ನು ಕಿಯೋನಿಕ್ಸ್ ಸಂಸ್ಥೆಗೆ ಬಿಡುಗಡೆ ಮಾಡಲು ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ ಮಾತಂಇ 38 ಎಂಡಿಎ 2008, ಬೆಂಗಳೂರು, ದಿನಾಂಕ: 21ನೇ ನವೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ, ಕಿಯೋನಿಕ್ಸ್ ಸಂಸ್ಥೆಯವರು ಕಾರ್ಯಗತಗೊಳಿಸುವ ಶಿವಮೊಗ್ಗ, ಮಂಗಳೂರು, ಮೈಸೂರು, ಬೆಳಗಾಂ ಹಾಗೂ ಹುಬ್ಬಳ್ಳಿ– ಧಾರವಾಡದಲ್ಲಿ ಐಟಿ ಪಾರ್ಕ್ ಸ್ಥಾಪಿಸಲು ಅನುವಾಗುವಂತೆ, ಹಂತ 2 ನಗರಗಳಲ್ಲಿ ಐಟಿ ಪಾರ್ಕ್ ಸ್ಥಾಪಿಸುವ ಸಲುವಾಗಿ 2009–10ನೇ ಸಾಲಿನ ಲೆಕ್ಕ ಶೀರ್ಷಿಕೆ "5465–01–190–1–13 ಹಂತ 2 ನಗರಗಳ ಸಲುವಾಗಿ ಕಿಯೋನಿಕ್ಸ್‌ನಲ್ಲಿ ಸಾಮ್ಯಷೇರು–ಮಾಹಿತಿ ತಂತ್ರಜ್ಞಾನ ಅಭಿವೃದ್ಧಿ –059–ಇತರೆ ಖರ್ಚು(ಯೋಜನೆ)" ಇದರಡಿಯಲ್ಲಿ ಒದಗಿಸಲಾಗಿರುವ ರೂ. 5 ಕೋಟಿಗಳ ಈಕ್ವಿಟಿ ಅನುದಾನದಲ್ಲಿ ರೂ.250.00 ಲಕ್ಷಗಳನ್ನು (ರೂ. ಇನ್ನೂರ

ವಿಷಯ: ಡಾ: ಎಂ.ಸಿ.ಪ್ರಭಾಕರ್, ವೈದ್ಯಾಧಿಕಾರಿ, ಐ.ಪಿ.ಪಿ–8 ಆರೋಗ್ಯ ಕೇಂದ್ರ, ತೊಣಚಿಕೊಪ್ಪಲು, ಮೈಸೂರು ಇವರ ರಾಜೀನಾಮೆಯನ್ನು ಅಂಗೀಕರಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಆಕುಕ ಸೇವೆಗಳು, ಬೆಂಗಳೂರು, ಇವರ ಪತ್ರ ಸಂಖ್ಯೆ :ಜೆ ಆರ್ ಒ(2) 251/ 2007–08 ದಿನಾಂಕ:18/06/2009

ಪ್ರಸ್ತಾವನೆ:

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ಮೇಲೆ ಓದಲಾದ ಪತ್ರದಲ್ಲಿ ಡಾ:ಎಂ.ಸಿ.ಪ್ರಭಾಕರ್, ಇವರು ದಿನಾಂಕ: 29/11/2002 ರಂದು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯಾಗಿ ಸೇವೆಗೆ ಸೇರಿದ್ದು, ಅನಿವಾರ್ಯ ಕಾರಣಗಳಿಂದ ದಿನಾಂಕ: 01/09/2008 ರಂದು ಹುದ್ದೆಗೆ ರಾಜೀನಾಮೆ ಸಲ್ಲಿಸಿ ದಿನಾಂಕ : 01/11/2008 ರಿಂದ ರಾಜೀನಾಮೆಯನ್ನು ಒಪ್ಪಿಕೊಳ್ಳುವಂತೆ ಕೋರಿದ್ದು, ಇವರ ವಿರುದ್ಧ ಇಲಾಖಾ ವಿಚಾರಣೆ ಇರುವುದಿಲ್ಲ ಹಾಗೂ ಬಾಂಡ್ ಅವಧಿಯಲ್ಲಿ ಇರುವುದಿಲ್ಲವಾದ್ದರಿಂದ ದಿನಾಂಕ:01/11/2008 ರಿಂದ ಜಾರಿಗೆ ಬರುವಂತೆ ವೈದ್ಯರ ರಾಜೀನಾಮೆಯನ್ನು ಅಂಗೀಕರಿಸಲು ಕೋರಿರುತ್ತಾರೆ.

ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಆಕುಕ 231 ಹೆಚ್ಎಸ್ಹೆಚ್ 2009 ಬೆಂಗಳೂರು, ದಿನಾಂಕ: 21ನೇ ನವೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಡಾ: ಎಂ.ಸಿ.ಪ್ರಭಾಕರ್, ವೈದ್ಯಾಧಿಕಾರಿ, ಐ.ಪಿ.ಪಿ–8 ಆರೋಗ್ಯ ಕೇಂದ್ರ, ತೊಣಚಿಕೊಪ್ಪಲು, ಮೈಸೂರು ಇವರು ನೀಡಿರುವ ರಾಜೀನಾಮೆಯನ್ನು ದಿನಾಂಕ: 01/11/2008 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 252(ಎ) ರನ್ವಯ ಅಂಗೀಕರಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಐ. ಹೇಮನಾಥ್
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ಸೇವೆಗಳು–1)

ಪಿ.ಆರ್. 2700

ವಿಷಯ: ಡಾ: ಪ್ರತಿಭಾ ವಿ.ಪಾಸ್ತೆ, ದಂತ ಆರೋಗ್ಯಾಧಿಕಾರಿ, ಸ್ನಾತಕೋತ್ತರ ವ್ಯಾಸಂಗ ನಡೆಸುತ್ತಿರುವ ಇವರ ರಾಜೀನಾಮೆಯನ್ನು ಅಂಗೀಕರಿಸುವ ಬಗ್ಗೆ,

ಓದಲಾಗಿದೆ: ಆಯುಕ್ತರು, ಆಕುಕ ಸೇವೆಗಳು, ಬೆಂಗಳೂರು, ಇವರ ಪತ್ರ ಸಂಖ್ಯೆ : ಎಲ್ಆರ್ಒ 41/2008–09 ದಿನಾಂಕ:06/05/2009

ಪ್ರಸ್ತಾವನೆ:

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರ ಮೇಲೆ ಓದಲಾದ ಪತ್ರದಲ್ಲಿ ಡಾ: ಪ್ರತಿಭಾ ವಿ.ಪಾಸ್ತೆ, ದಂತ ಆರೋಗ್ಯಾಧಿಕಾರಿ, ಇವರು ಸರ್ಕಾರಿ ಆದೇಶ ಸಂಖ್ಯೆ: ಆಕುಕ 10 ಹೆಚ್ಎಸ್ಡಿ 2002 ದಿನಾಂಕ: 16/08/2002ರ ಪ್ರಕಾರ ದಿನಾಂಕ: 31/08/2002 ರಂದು ಸೇವೆಗೆ ಸೇರಿದ್ದು. ದಿನಾಂಕ: 01/06/2008 ರಿಂದ 31/08/2001ರ ವರೆಗೆ ಅಸಾಧಾರಣ ರಜೆ ಮಂಜೂರು ಮಾಡಿ ಕೆ.ಎಲ್.ಇ ಸಂಸ್ಥೆ, ಬೆಳಗಾಂ ಇಲ್ಲಿ ಖಾಸಗಿಯಾಗಿ ಸ್ನಾತಕೋತ್ತರ ವ್ಯಾಸಂಗ ನಡೆಸಲು ಅನುಮತಿ ನೀಡಲಾಗಿತ್ತು ನಂತರ ಸದರಿ ವೈದ್ಯರು ರಾಜೀನಾಮೆ ಸಲ್ಲಿಸಿ, ಅಸಾಧಾರಣ ರಜೆ ಮಂಜೂರು ಮಾಡಿದ ದಿನಾಂಕ: 01/06/2008 ರಿಂದ ಅಂಗೀಕರಿಸುವಂತೆ ಕೋರಿರುತ್ತಾರೆ. ಇವರ ವಿರುದ್ದ ಯಾವುದೇ ಇಲಾಖಾ ವಿಚಾರಣೆ ಹಾಗೂ ಸರ್ಕಾರಕ್ಕೆ ಯಾವುದೇ ಬಾಕಿ ಇರುವುದಿಲ್ಲ ಮತ್ತು ಬಾಂಡ್ ಅವಧಿಯಲ್ಲಿ ಇರುವುದಿಲ್ಲವಾದ್ದರಿಂದ ದಿನಾಂಕ: 01/06/2008 ರಿಂದ ಜಾರಿಗೆ ಬರುವಂತೆ ರಾಜೀನಾಮೆಯನ್ನು ಅಂಗೀಕರಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲ್ಕಂಡ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಆಕುಕ 194 ಹೆಚ್ಎಸ್ಹೆಚ್ 2009 ಬೆಂಗಳೂರು, ದಿನಾಂಕ: 21ನೇ ನವೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನಲೆಯಲ್ಲಿ, ಡಾ: ಪ್ರತಿಭಾ ವಿ.ಪಾಸ್ತೆ, ದಂತ ಆರೋಗ್ಯಾಧಿಕಾರಿ, ಪ್ರಸ್ತುತ ಕೆ.ಎಲ್.ಇ ಸಂಸ್ಥೆ, ಬೆಳಗಾಂ ಇಲ್ಲಿ ಸ್ನಾತಕೋತ್ತರ ವ್ಯಾಸಂಗ ನಡೆಸುತ್ತಿರುವ ಇವರು ತಮ್ಮ ಹುದ್ದೆಗೆ ನೀಡಿರುವ ರಾಜೀನಾಮೆಯನ್ನು ದಿನಾಂಕ : 01/06/2008ರಿಂದ ಜಾರಿಗೆ ಬರುವಂತೆ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 252(ಎ) ರನ್ವಯ ಅಂಗೀಕರಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
ಐ. ಹೇಮನಾಥ್
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ಸೇವೆಗಳು –1)

ಪಿ.ಆರ್. 2701

ವಿಷಯ: ಶಿವಮೊಗ್ಗ ಜಿಲ್ಲೆ, ಹೊಸನಗರ ತಾಲ್ಲೂಕಿನ ನಿಟ್ಟೂರು ಗ್ರಾಮ ಪಂಚಾಯತಿ ನಾಗೋಡಿ ಗ್ರಾಮದ ಸಿದ್ಲಕುಣಿ ಹಳ್ಳಕ್ಕೆ ಬ್ಯಾರೆಜ್ ನಿರ್ಮಾಣ ಕಾಮಗಾರಿಯ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ದಿನಾಂಕ: 07/11/2009ರ ಬೆಂಗಳೂರು, ಸಣ್ಣ ನೀರಾವರಿ ದಕ್ಷಿಣ ವಲಯದ ಮುಖ್ಯ ಇಂಜಿನಿಯರ್‌ರವರ ಪತ್ರ ಸಂಖ್ಯೆ: ಮುಸದ/ಬೆಂ/ತಾಂ–3/ಸ.ಇಂ.8/ಶಿವಮೊಗ್ಗ/2009/4330.

ಪ್ರಸ್ತಾವನೆ:

ಮೇಲ್ಕಂಡ ಕಾಮಗಾರಿಗೆ 2009–10ನೇ ಸಾಲಿಗೆ ಮುಂದುವರೆಸಿರುವ 2007–08ನೇ ಸಾಲಿನ ಸಣ್ಣ ನೀರಾವರಿ ಬೆಂಗಳೂರು ವೃತ್ತದ ದರಪಟ್ಟಿಯಂತೆ ತಯಾರಿಸಲಾದ ರೂ. 48.00 ಲಕ್ಷದ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮುಖ್ಯ ಇಂಜಿನಿಯರ್, ಸಣ್ಣ ನೀರವಾರಿ ದಕ್ಷಿಣ ವಲಯ, ಬೆಂಗಳೂರುರವರು ಮೇಲೆ ಓದಲಾದ ಪತ್ರದಲ್ಲಿ ಪ್ರಸ್ತಾವನೆ ಸಲ್ಲಿಸಿದ್ದಾರೆ.

ಉದ್ದೇಶಿತ ಬ್ಯಾರೇಜನ್ನು ಹೊಸನಗರ ತಾಲ್ಲೂಕಿನ ನಾಗೋಡಿ ಗ್ರಾಮದ ಸಿದ್ಲಗುಂಡಿ ಹಳ್ಳಕ್ಕೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿದ್ದು, 10 ಕಿಂಡಿಗಳನ್ನು ಹೊಂದಿರುವ ಈ ಬ್ಯಾರೆಜಿನ ಉದ್ದ 23.30 ಮೀ, ಹಾಗೂ ಎತ್ತರ 2.50 ಮೀ ಇರುತ್ತದೆ. ಬ್ಯಾರೆಜಿನ ಮೇಲ್ಭಾಗದಲ್ಲಿ 2.10ಮೀ ಅಗಲದ ಕಾಲು ಸೇತುವೆಯನ್ನು ನಿರ್ಮಿಸಲು ಪ್ರಸ್ತಾಪಿಸಿಲಾಗಿದೆ. ಇದರಲ್ಲಿ 10.20 ದಶಲಕ್ಷ ಘನ ಅಡಿ ನೀರನ್ನು ಶೇಕರಿಸಲು ವಿನ್ಯಾಸಿಸಿದ್ದು, ಸಿಡ್ಲಗುಂಡಿ ಗ್ರಾಮದ ಪರಿಶಿಷ್ಟ ಪಂಗಡ ಜನಾಂಗದವರ 20 ಹೆಕ್ಟೇರ್ ಪ್ರದೇಶದಲ್ಲಿ ರೆನೀರಾವರಿ ಹಿಂಗಾರು/ಬೇಸಿಗೆ ಬೆಳೆಗಳಿಗೆ ನೀರಾವರಿ ಸೌಲಭ್ಯ ಕಲಿಸಲು ಉದ್ದೇಶಿಸಿದೆ. ಕಾಮಗಾರಿಯ ಲಾಭ–ವೆಚ್ಚದ ಅನುಪಾತ ಶೇ.10ರ ಬಡ್ಡಿ ದರದಲ್ಲಿ 2.09 ಆಗಿದ್ದು, ಯೋಜನೆಯು ಆರ್ಥಿಕವಾಗಿ ಶಕ್ಯವಾಗಿರುತ್ತದೆ.

ಕಾಮಗಾರಿಯ ಅಂದಾಜು ಪಟ್ಟಿಯನ್ನು ದಿನಾಂಕ:13.02.2009 ರಂದು ಮುಖ್ಯ ಇಂಜಿನಿಯರ್ ಸಣ್ಣ ನೀರಾವರಿ ದಕ್ಷಿಣ ವಲಯ ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ನಡೆದ ತಾಂತ್ರಿಕ ಸಮಿತಿಯ ಸಭೆಗೆ ಮಂಡಿಸಿದ್ದು, ಸಮಿತಿಯು ಅಂದಾಜಿನಲ್ಲಿ ಕೆಲವೊಂದು ಅಂಶಗಳನ್ನು ಗಮನಿಸಿ, ಷರಾಗಳೊಂದಿಗೆ ಅಂದಾಜಿಗೆ ತೀರುವಳಿ ನೀಡಿದೆ.

2009–10ನೇ ಸಾಲಿನ ಮುಂದುವರೆದ ಕಾಮಗಾರಿಗಳ ಅನುಬಂಧ–ಇ ರಲ್ಲಿ ಲೆಕ್ಕ ಶೀರ್ಷಿಕೆ 4702–00–101–5–01–423 ಅಣೆಕಟ್ಟು ಬಂದಾರುಗಳು ಗಿರಿಜನ ಉಪಯೋಜನೆ ಶೀರ್ಷಿಕೆಯಡಿ 48.00 ಲಕ್ಷ ರೂ.ಗಳ ಅಂದಾಜು ಮೊತ್ತ ಹಾಗೂ 28.80 ಲಕ್ಷ ರೂ.ಗಳ ಅನುದಾನದೊಂದಿಗೆ ಈ ಕಾಮಗಾರಿಯನ್ನು ಕೈಗೊಳ್ಳಲು ಅವಕಾಶ ಮಾಡಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 88 ಅಪಿಬಂ 2009, ಬೆಂಗಳೂರು, ದಿನಾಂಕ: 24ನೇ ನವೆಂಬರ್ 2009

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶಿವಮೊಗ್ಗ ಜಿಲ್ಲೆ, ಹೊಸನಗರ ತಾಲ್ಲೂಕಿನ ನಿಟ್ಟೂರು ಗ್ರಾಮ ಪಂಚಾಯತಿ ನಾಗೋಡಿ ಗ್ರಾಮದ ಸಿದ್ಲಕುನಿ ಹಳ್ಳಕ್ಕೆ ಬ್ಯಾರೆಜ್ ನಿರ್ಮಾಣ ಕಾಮಗಾರಿಯ, 2009–10ನೇ ಸಾಲಿಗೆ ಮುಂದುವರೆಸಿರುವ 2007–08ನೇ ಸಾಲಿನ ಸಣ್ಣ ನೀರಾವರಿ ಬೆಂಗಳೂರು ವೃತ್ತದ ದರಪಟ್ಟಿಯಂತೆ ತಯಾರಿಸಲಾದ 48.00 ಲಕ್ಷ ರೂ.ಗಳ (ನಲವತ್ತೆಂಟು ಲಕ್ಷ ರೂ.ಗಳು ಮಾತ್ರ) ಅಂದಾಜು ಪಟ್ಟಿಗೆ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

1) ಕಾಮಗಾರಿಯ ವೆಚ್ಚವು ಯಾವುದೇ ಕಾರಣಕ್ಕೂ ಅನುಮೋದಿಸಿದ ಟೆಂಡರ್ ಮೊತ್ತಕ್ಕಿಂತ ಹೆಚ್ಚಾಗಬಾರದು ಹಾಗೂ ಕಾಮಗಾರಿಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸತಕ್ಕದ್ದು.
2) ಒಂದು ವೇಳೆ ಸ್ಥಳ ಪರಿಸ್ಥಿತಿಗೆ ಅನುಗುಣವಾಗಿ ಹೆಚ್ಚಳ ನಿರೀಕ್ಷಿಸಿದಲ್ಲಿ ತಕ್ಷಣವೇ ಸಕ್ಷಮ ಪ್ರಾಧಿಕಾರದಿದ ಅನುಮೋದನೆ ಪಡೆದು ಕಾಮಗಾರಿಯನ್ನು ಪೂರ್ಣಗೊಳಿಸತಕ್ಕದ್ದು.
3) ಕಾಮಗಾರಿ ಪ್ರಾರಂಭಿಸುವ ಮುನ್ನ ವಿನ್ಯಾಸ ಬದಲಾವಣೆಯಿಂದಾಗಿ ಅಥವಾ ಬೇರೆ ಕಾರಣದಿಂದ ಅನುಮೋದಿಸಿದ ಅಂದಾಜು ಮೊತ್ತ ಹೆಚ್ಚಾಗುವ ಸಭವ ಇದ್ದಲ್ಲಿ, ತಕ್ಷಣ ಪರಿಷ್ಕೃತ ಅಂದಾಜಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಂತರ ಕಾಮಗಾರಿಯನ್ನು ಪ್ರಾರಂಭಿಸುವುದು.
4) ಕಾಮಗಾರಿಯ ಅಂದಾಜು ಪಟ್ಟಿಗೆ ಸಂಬಂಧಿಸಿದಂತೆ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:13.02.2009 ರಂದು ನಡೆದ ತಾಂತ್ರಿಕ ಸಮಿತಿಯು ಸಭೆಯಲ್ಲಿ ನೀಡಿರುವ ಸೂಚನೆಗಳನ್ನು ಚಾಚೂ ತಪ್ಪದೇ ಪಾಲಿಸತಕ್ಕದ್ದು.
5) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಅನುಸಾರ ಟೆಂಡರ್ ಕರೆದು ತೆಗೆದುಕೊಳ್ಳತಕ್ಕದ್ದು.
6) ಕಾಮಗಾರಿಗೆ ಅಗತ್ಯವಿರುವ ಜಮೀನಿನ ಸ್ವಾಧೀನಕ್ಕಾಗಿ ನಿಯಮಾನುಸಾರ ತಕ್ಷಣ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ಕೈಗೊಳ್ಳತಕ್ಕದ್ದು.

7) ಕಾಮಗಾರಿ ಪೂರ್ಣಗೊಂಡ ಕೂಡಲೇ ಪಿ.ಸಿ.ಆರ್ ವರದಿಯನ್ನು ಸಲ್ಲಿಸತಕ್ಕದ್ದು. ಹಾಗೂ ಅವಶ್ಯಕತೆ ಇದ್ದಲ್ಲಿ ಪರಿಷ್ಕೃತ ಅಂದಾಜು ತಯಾರಿಸಿ ಟಿ.ಎ.ಸಿ. ಅನುಮೋದನೆ ಪಡೆದು ಸಂಬಂಧಿಸಿದ ಸಕ್ಷಮ ಅಧಿಕಾರಿಗಳಿಗೆ ಅನುಮೋದನೆಗಾಗಿ ಸಲ್ಲಿಸುವುದು.

8) ಇ.ಐ.ಆರ್.ಎಲ್/ವರ್ಕ್‌ಸ್ಲಿಪ್‌ಗಳನ್ನು ಸಲ್ಲಿಸಬೇಕಾದಲ್ಲಿ ತಕ್ಷಣವೇ ಸಲ್ಲಿಸತಕ್ಕದ್ದು.

9) ತಾಂತ್ರಿಕ ಮಂಜೂರಾತಿಯನ್ನು ನೀಡುವ ಮೊದಲು ಅಂದಾಜನ್ನು ಮತ್ತೊಮ್ಮೆ ವಿವರವಾಗಿ ಪರಿಶೀಲಿಸುವುದು.

10) ಈ ಯೋಜನೆಗೆ ನೀರು ಬಳಕೆದಾರರ ಸಂಘವನ್ನು ಸೃಜಿಸಬೇಕು ಹಾಗೂ ನಿರ್ವಹಣೆಯನ್ನು ಸದರಿ ಸಂಘಕ್ಕೆ ವಹಿಸತಕ್ಕದ್ದು.

11) ಈ ಯೋಜನೆಗೆ ಬಳಕೆ ಮಾಡಲು ಉದ್ದೇಶಿಸಿರುವ ನೀರಿನ ಪರಿಮಾಣವು ಸಂಬಂಧಪಟ್ಟ ಉಪಕೊಳ್ಳದಲ್ಲಿ ಸಣ್ಣ ನೀರಾವರಿ ಯೋಜನೆಗಳ ಉಪಯೋಗಕ್ಕಾಗಿ ಮಾಡಿರುವ ಒಟ್ಟು ಹಂಚಿಕೆಯನ್ನು ಮೀರಬಾರದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ: 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2708 **ಕೆ. ಸುಧಾಕರ ಶೆಟ್ಟಿ**

ಸರ್ಕಾರದ ಅಧೀನ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ವಿಷಯ: ಗುಲ್ಬರ್ಗಾ ಜಿಲ್ಲೆ, ಆಳಂದ ತಾಲ್ಲೂಕು ನಿಂಬಾಳ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 19/09/09ರ ಪತ್ರ ಸಂಖ್ಯೆ:ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/ 2009–10/5536.

ಪ್ರಸ್ತಾವನೆ:

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರ ಪತ್ರದಲ್ಲಿ ಗುಲ್ಬರ್ಗಾ ಜಿಲ್ಲೆ, ಆಳಂದ ತಾಲ್ಲೂಕು ನಿಂಬಾಳ ಸಣ್ಣ ನೀರಾವರಿ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ನಿಂಬಾಳ ಗ್ರಾಮದ ಜಮೀನಿಗೆ ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನಿನ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 03/03/1977
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 15/03/1978.

ಭೂಸ್ವಾಧೀನಕ್ಕೊಳಪಟ್ಟ ಜಮೀನಿನ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಆಳಂದದ ಸಿವಿಲ್ ನ್ಯಾಯಾಲಯ(ಹಿರಿಯ ಶ್ರೇಣಿ)ದಲ್ಲಿ ಎಲ್.ಎ.ಸಿ. ದಾಖಲಿಸಿದ್ದು, ನ್ಯಾಯಾಲಯವು ಪ್ರತಿ ಎಕರೆಗೆ ರೂ.9,300/–ಗಳಿಗೆ ಪರಿಹಾರ ಧನವನ್ನು ಹೆಚ್ಚಿಸಿ ಇತರೆ ಸವಲತ್ತುಗಳೊಂದಿಗೆ ಭೂಮಾಲೀಕರಿಗೆ ಪಾವತಿಸುವಂತೆ ಆದೇಶ ನೀಡಿದೆ. ಈ ತೀರ್ಪಿನ ವಿರುದ್ಧ ಗುಲ್ಬರ್ಗಾದ ಜಿಲ್ಲಾ ನ್ಯಾಯಾಲಯದಲ್ಲಿ ಎಲ್.ಎ.ಸಿ.ಎ. 58/07ನ್ನು ದಾಖಲಿಸಿದ್ದು, ಜಿಲ್ಲಾ ನ್ಯಾಯಾಲಯವು ದಿನಾಂಕ 27/01/09ರಂದು ನೀಡಿದ ತೀರ್ಪಿನಲ್ಲಿ ಸಿವಿಲ್ ನ್ಯಾಯಾಲಯದ ತೀರ್ಪನ್ನು ಎತ್ತಿ ಹಿಡಿದಿದೆ. ಈ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸುವ ಅಗತ್ಯವಿಲ್ಲವೆಂದು ಕಂದಾಯ ಇಲಾಖೆಯ ಕಾನೂನು ಕೋಶವು ಪತ್ರ ಸಂಖ್ಯೆ:ಆರ್‌ಡಿ 866 ಎಲ್‌ಸಿಜಿ 2009, ದಿನಾಂಕ 30/04/09ರಲ್ಲಿ ಅಭಿಪ್ರಾಯ ನೀಡಿದೆ. ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿರುವ ಪ್ರಕರಣದ ವಿವರ ಕೆಳಕಂಡಂತಿದೆ:

ಕ್ರ. ಸಂ	ಎಲ್‌ಎಸಿ ಸಂಖ್ಯೆ	ಎಲ್‌ಎಸಿಎ	ನಿಂಬಾಳ ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	**9/06**	**58/07**	**103/2ಬಿ**	**0–06**	**9,861–00**
	ಒಟ್ಟು				**9,861–00**

- **ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಸನೀಇ 144 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 24ನೇ ನವೆಂಬರ್ 2009.

ಗುಲ್ಬರ್ಗಾ ಜಿಲ್ಲೆ, ಅಳಂದ ತಾಲ್ಲೂಕು ನಿಂಬಾಳ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ನಿಂಬಾಳ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್ 103/2ಬಿ ರ 0–06 ಎಕರೆ ಜಮೀನಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ.9,861–00ಗಳನ್ನು (ಒಂಭತ್ತು ಸಾವಿರದ ಎಂಟುನೂರ ಅರವತ್ತೊಂದು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/09/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2709 **ಕೆ. ಸುಧಾಕರ ಶೆಟ್ಟಿ**

ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ವಿಷಯ: ಗುಲ್ಬರ್ಗಾ ಜಿಲ್ಲೆ, ಅಳಂದ ತಾಲ್ಲೂಕು ನರೋಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 13/02/07ರ ಪತ್ರ ಸಂಖ್ಯೆ:ಮುಇಂ/ಸನೀ(ಉ)ವ/ಭೂಸ್ವಾಪ್ರ/06–07/ 1201.

ಪ್ರಸ್ತಾವನೆ:

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರ ಪತ್ರದಲ್ಲಿ ಗುಲ್ಬರ್ಗಾ ಜಿಲ್ಲೆ, ಅಳಂದ ತಾಲ್ಲೂಕು ನರೋಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ನರೋಣ ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.1,01,460–00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 29/11/1990
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಮ ಘೋಷಿಸಿದ ದಿನಾಂಕ 22/01/1993

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಗುಲ್ಬರ್ಗಾ ಸಿವಿಲ್ ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಅಭಿಪ್ರಾಯ ನೀಡಿದೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ:

ಕ್ರ. ಸಂ	ಎಲ್‌ಎಸಿ ಸಂಖ್ಯೆ	ನರೋಣ ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	1104/96	266/A	0–32	1,01,460–00
	ಒಟ್ಟು			**1,01,460–00**

- **ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಸನೀಇ 49 ಭೂಸ್ವಾಪ್ರ 2007, ಬೆಂಗಳೂರು, ದಿನಾಂಕ 20ನೇ ನವೆಂಬರ್ 2009.

ಗುಲ್ಬರ್ಗಾ ಜಿಲ್ಲೆ, ಆಳಂದ ತಾಲ್ಲೂಕು ನರೋಣ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ನರೋಣ ಗ್ರಾಮಕ್ಕೆ ಸೇರಿದ ಪ್ರಸ್ತಾವನೆಯಲ್ಲಿ ನಮೂದಿಸಿರುವ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣದಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ.1,01,460–00ಗಳನ್ನು (ಒಂದು ಲಕ್ಷದ ಒಂದು ಸಾವಿರದ ನಾನೂರ ಅರವತ್ತು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2710 **ಕೆ. ಸುಧಾಕರ ಶೆಟ್ಟಿ**

ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ(ಸಣ್ಣ ನೀರಾವರಿ)

ವಿಷಯ: ಯಂಕಂಚಿ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ಏಕ ಮಧ್ಯಸ್ಥಿಕೆ ಪ್ರಕರಣದ ಬಗ್ಗೆ.

ಓದಲಾಗಿದೆ: ದಿನಾಂಕ 03/11/2009ರ ಪತ್ರ ವ್ಯವಹಾರದೊಂದಿಗೆ ಅಂತ್ಯಗೊಂಡಿರುವ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ಪತ್ರ ಸಂಖ್ಯೆ: ಮುಇಂ/ಸನೀ(ಉ)ವ/ಬಿಜಾ/ಲೆಶಾ/2008–09/6543.

ಪ್ರಸ್ತಾವನೆ:

ಬಿಜಾಪುರ ಜಿಲ್ಲೆ, ಸಿಂಧಗಿ ತಾಲ್ಲೂಕಿನ ಯಂಕಂಚಿ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣ ಕಾಮಗಾರಿಯನ್ನು ಎಲ್.ಸಿ.ಬಿ. ಗುತ್ತಿಗೆ ಕರಾರಿನ ಮೇಲೆ 1ನೇ ದರ್ಜೆ ಗುತ್ತಿಗೆದಾರರಾದ ಶ್ರೀ ಎನ್.ಹೆಚ್.ಭಗವಾನ್ ರವರಿಗೆ ರೂ.33,61,075–70ಗಳಿಗೆ ದಿನಾಂಕ 21/05/84ರಲ್ಲಿ ವಹಿಸಲಾಗಿತ್ತು. ಕರಾರಿನಂತೆ ಕಾಮಗಾರಿಯನ್ನು 24 ತಿಂಗಳಲ್ಲಿ ಅಂದರೆ ದಿನಾಂಕ 10/06/86ರೊಳಗೆ ಪೂರ್ಣಗೊಳಿಸಬೇಕಾಗಿತ್ತು. ಆದರೆ, ಅನೇಕ ಕಾರಣಗಳಿಂದ ಹಾಗೂ ಗುತ್ತಿಗೆ ಕರಾರಿನ ಉಲ್ಲಂಘನೆಯಿಂದಾಗಿ ಕಾಮಗಾರಿಯನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸಾಧ್ಯವಾಗಿರಲಿಲ್ಲ. ಕಾಮಗಾರಿಯು ಜಾರಿಯಲ್ಲಿದ್ದ ಸಂದರ್ಭದಲ್ಲಿ ಗುತ್ತಿಗೆದಾರರು ಹಾಗೂ ಇಲಾಖೆಯ ಮಧ್ಯೆ ಉಂಟಾದ ವಿವಾದಗಳ ಇತ್ಯರ್ಥಕ್ಕಾಗಿ ಗುತ್ತಿಗೆ ಕರಾರಿನ ಕಲಂ 52ರ ಮೇರೆಗೆ ಪ್ರಕರಣವನ್ನು ಮಧ್ಯಸ್ಥಿಕೆಗೆ ವಹಿಸಲಾಗಿತ್ತು. ಈ ಪ್ರಕರಣದಲ್ಲಿ ಅಂದಿನ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ, ಬೆಂಗಳೂರು ಇವರ ಆದೇಶ ಸಂಖ್ಯೆ:ಸಿಎಂಐ/ಐಜಿಎನ್–2/ಬಿಜೆಪಿ/ಯಂಕಂಜಿ/ ಟ್ಯಾಂಕ್/92–93, ದಿನಾಂಕ 19/04/88ರಲ್ಲಿ ಶ್ರೀ ಎಂ.ವಿ.ಜನಾರ್ಧನ ಅಯ್ಯಂಗಾರ್, ಅಧೀಕ್ಷಕ ಇಂಜಿನಿಯರ್, ಇ.ಸಿ.ಪಿ.ಸಿ. ಆಲಮಟ್ಟಿ ಇವರನ್ನು ಏಕ ಮಧ್ಯಸ್ಥಿಕೆದಾರರನ್ನಾಗಿ ನೇಮಿಸಲಾಗಿತ್ತು. ಶ್ರೀಯುತರು ಈ ಪ್ರಕರಣದಲ್ಲಿ ವಿಚಾರಣೆ ನಡೆಸಿ ದಿನಾಂಕ 29/06/89ರಂದು ಐತೀರ್ಪನ್ನು ಪ್ರಕಟಿಸಿರುತ್ತಾರೆ. ಮಧ್ಯಸ್ಥಿಕೆದಾರರ ಐತೀರ್ಪು ಬಿಜಾಪುರದ ಪ್ರಿನ್ಸಿಪಲ್ ಸಿವಿಲ್ ಜಡ್ಜ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ದಿನಾಂಕ 29/06/89ರಂದು ನ್ಯಾಯಾಜ್ಞೆಯಾಗಿದೆ ಹಾಗೂ ಮಧ್ಯಸ್ಥಿಕೆ ಪ್ರಕರಣ ಸಂಖ್ಯೆ:2/09ರಲ್ಲಿ ದಿನಾಂಕ 02/02/90ರಂದು ಡಿಕ್ರಿ ಆಗಿದೆ. ಸಿವಿಲ್ ನ್ಯಾಯಾಲಯದ ಡಿಕ್ರಿ ಆದೇಶವನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಎಂಎಫ್‌ಎ ಪ್ರಕರಣ ಸಂಖ್ಯೆ:1932/90ರಲ್ಲಿ ಸರ್ಕಾರವು ಪ್ರಶ್ನಿಸಿತ್ತು. ಆದರೆ, ದಿನಾಂಕ 06/11/90ರ ತೀರ್ಪಿನಲ್ಲಿ ಮಾನ್ಯ ಉಚ್ಚ ನ್ಯಾಯಾಲಯವು ಸಿವಿಲ್ ನ್ಯಾಯಾಲಯದ ತೀರ್ಪನ್ನು ಸ್ಥಿರೀಕರಿಸಿ ಮೇಲ್ಮನವಿಯನ್ನು ವಜಾಗೊಳಿಸಿದೆ.

ಮೇಲ್ಮನವಿ ವಜಾಗೊಂಡಿದ್ದರಿಂದ, ಗುತ್ತಿಗೆದಾರರು ಮಧ್ಯಸ್ಥಿಕೆದಾರರ ಐತೀರ್ಪು ಹಾಗೂ ಸಿವಿಲ್ ನ್ಯಾಯಾಲಯದ ಡಿಕ್ರಿ ಅನುಸಾರ ಐತೀರ್ಪಿನ ಮೊತ್ತದ ಮೇಲೆ ಶೇ.12ರಷ್ಟು ಬಡ್ಡಿ ಸೇರಿದಂತೆ ರೂ.20,21,887–00ಗಳ ಹಣ ಪಾವತಿಗಾಗಿ ಈಗಾಗಲೇ ಸಿವಿಲ್ ನ್ಯಾಯಾಲಯದಲ್ಲಿ ಪ್ರಕರಣ ಸಂಖ್ಯೆ:43/91ರಲ್ಲಿ ಜಾರಿ ದಾವೆ ದಾಖಲಿಸಿದ್ದರು. ಈ ಹಂತದಲ್ಲಿ ಗುತ್ತಿಗೆದಾರರಿಗೆ ರೂ.13,70,853–00ಗಳನ್ನು ಪಾವತಿಸಲಾಗಿತ್ತು. ಹೀಗಾಗಿ ಮಾನ್ಯ ನ್ಯಾಯಾಲಯವು ಈ ಜಾರಿ ದಾವೆಯಲ್ಲಿ ಪರಿಷ್ಕೃತ ಲೆಕ್ಕಾಚಾರ ತ:ಖ್ತೆಯೊಂದಿಗೆ ಹೊಸದಾಗಿ ಜಾರಿ ದಾವೆ ಸಲ್ಲಿಸುವಂತೆ ತಿಳಿಸಿ ದಿನಾಂಕ 12/07/95ರಂದು ತೀರ್ಪು ನೀಡಿತ್ತು. ಇದರಿಂದಾಗಿ ಗುತ್ತಿಗೆದಾರರು ಪ್ರಕರಣ ಸಂಖ್ಯೆ:1417/95ರಲ್ಲಿ ಹೊಸದಾಗಿ ಜಾರಿ ದಾವೆಯನ್ನು ದಾಖಲಿಸಿದ್ದು, ಈ

ಜಾರಿ ದಾವೆಯಲ್ಲಿ ಮಾನ್ಯ ನ್ಯಾಯಾಲಯವು ದಿನಾಂಕ 31/08/01ರಂದು ನೀಡಿದ ತೀರ್ಪಿನಲ್ಲಿ ಗುತ್ತಿಗೆದಾರರಿಗೆ ರೂ.13,33,00–00ಗಳನ್ನು ಪಾವತಿಸುವಂತೆ ಹಾಗೂ ಪಾವತಿ ದಿನಾಂಕದವರೆಗೆ ರೂ.9,77,602–00ಗಳ ಮೇಲೆ ಶೇ.12ರಂತೆ ಬಡ್ಡಿ ಪಾವತಿಸುವಂತೆ ನಿರ್ದೇಶಿಸಿದೆ.

ಈ ತೀರ್ಪನ್ನು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 27019/05ರಲ್ಲಿ ಪ್ರಶ್ನಿಸಿತ್ತು. ಆದರೆ, ಪ್ರಕರಣವು ದಿನಾಂಕ 15/02/08ರ ತೀರ್ಪಿನಲ್ಲಿ ವಜಾ ಗೊಂಡಿದೆ ಹಾಗೂ ಈ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸದಿರುವ ಅಭಿಪ್ರಾಯವನ್ನು ಜಲಸಂಪನ್ಮೂಲ ಇಲಾಖೆಯ ಕಾನೂನು ಕೋಶವು ದಿನಾಂಕ 26/11/09ರ ಅಧಿಕೃತ ಜ್ಞಾಪನಾ ಸಂಖ್ಯೆ:ಸನೀಇ 11 ದಾಮಪ್ರ 2008ರಲ್ಲಿ ನೀಡಿದೆ. ಹೀಗಾಗಿ ಈ ಪ್ರಕರಣದಲ್ಲಿ ಗುತ್ತಿಗೆದಾರರಿಗೆ ಬಡ್ಡಿ ಸೇರಿದಂತೆ ಒಟ್ಟು ಮೊತ್ತ ರೂ.29,96,905–00ಗಳನ್ನು ಪಾವತಿಸಲು ಅನುಮೋದನೆ ನೀಡುವಂತೆ ಹಾಗೂ ಈ ಮೊತ್ತವನ್ನು ಬಿಡುಗಡೆ ಮಾಡುವಂತೆ ಮುಖ್ಯ ಇಂಜಿನಿಯರ್ ಮೇಲೆ ಓದಲಾದ ಪತ್ರದಲ್ಲಿ ಕೋರಿದ್ದಾರೆ.

ವಿಷಯವನ್ನು ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಸನೀಇ 11 ದಾಮಪ್ರ 2009, ಬೆಂಗಳೂರು, ದಿನಾಂಕ: 3ನೇ ಡಿಸೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬಿಜಾಪುರ ಜಿಲ್ಲೆ, ಸಿಂಧಗಿ ತಾಲ್ಲೂಕಿನ ಯಂಕಂಚಿ ಗ್ರಾಮದ ಸಣ್ಣ ನೀರಾವರಿ ಕೆರೆ ನಿರ್ಮಾಣ ಕಾಮಗಾರಿಯ ಮಧ್ಯಸ್ಥಿಕೆ ಪ್ರಕರಣದಲ್ಲಿ ಮಧ್ಯಸ್ಥಿಕೆದಾರರ ಐತೀರ್ಪು ಹಾಗೂ ನ್ಯಾಯಾಲಯದ ಡಿಕ್ರಿ ಆದೇಶದಂತೆ ಗುತ್ತಿಗೆದಾರರಿಗೆ ರೂ.29,96,905–00ಗಳನ್ನು (ಇಪ್ಪತ್ತೊಂಭತ್ತು ಲಕ್ಷದ ತೊಂಭತ್ತಾರು ಸಾವಿರದ ಒಂಭೈನೂರ ಐದು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿ ಅನುದಾನದ ಬಿಡುಗಡೆ ಮಾಡಿದೆ.

ಹಣ ಠೇವಣಿಗೆ ಮುನ್ನ ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ಪರಿಶೀಲಿಸಿ ಸರಿಯಾಗಿದೆಯೆಂದು ಖಾತರಿಪಡಿಸಿಕೊಳ್ಳತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ "4702–00–101–1–02 ಸಣ್ಣ ನೀರಾವರಿ ಮೇಲಿನ ಬಂಡವಾಳ ವೆಚ್ಚ (ಯೋಜನೆ) ಹೊಸಕೆರೆಗಳ ನಿರ್ಮಾಣ" ಅಡಿಯಲ್ಲಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2765 **ಕೆ. ಸುಧಾಕರ ಶೆಟ್ಟಿ**

ಸರ್ಕಾರದ ಅಧೀನ ಕಾರ್ಯದರ್ಶಿ, ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ).

ಇಂಧನ ಸಚಿವಾಲಯ

ಸೇರ್ಪಡೆ

ಸಂಖ್ಯೆ: ಇಎನ್ 49 ಎನ್‌ಸಿಇ 2008, ಬೆಂಗಳೂರು, ದಿನಾಂಕ: 16ನೇ ನವೆಂಬರ್ 2009

ಸರ್ಕಾರಿ ಆದೇಶ ಸಂಖ್ಯೆ: ಇಎನ್ 49 ಎನ್‌ಸಿಇ 2008 ದಿನಾಂಕ: 3.10.2009ರ ಆದೇಶ ಭಾಗದ ಮೊದಲನೆ ಕಂಡಿಕೆಯಲ್ಲಿ ಈ ಕೆಳಗಿನಂತೆ ಸೇರಿಸಿಕೊಂಡು ಓದಿಕೊಳ್ಳತಕ್ಕದ್ದು:–

"Weir-Longitude: 74°41'48" Latitude: 14°50'01".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2639 **ಎಸ್.ಜೆ. ಸಂಪತ್‌ಕುಮಾರ್**

ಸರ್ಕಾರದ ಅಧೀನ ಕಾರ್ಯದರ್ಶಿ, ಇಂಧನ ಇಲಾಖೆ

ಒಳಾಡಳಿತ ಸಚಿವಾಲಯ

ತಿದ್ದೋಲೆ

ನಂ: ಒಇ 85 ಕಸೈಸೇ 2009, ಬೆಂಗಳೂರು, ದಿನಾಂಕ: 18ನೇ ನವೆಂಬರ್ 2009

ಸರ್ಕಾರಿ ಆದೇಶ ಸಂಖ್ಯೆ: ಒಇ 85 ಕಸೈಸೇ 2009, ದಿನಾಂಕ: 22.10.2009ರ ಆದೇಶ ಭಾಗದ ಕ್ರಮ ಸಂಖ್ಯೆ "5) ಫ್ಲ್ಯಾಗ್ ಆಫೀಸರ್ ಕಮಾಂಡಿಂಗ್–ಇನ್–ಚೀಫ್ ಸದರನ್ ನೇವಲ್ ಕಮಾಂಡ್, ಕೊಚ್ಚಿ–ಉಪಾಧ್ಯಕ್ಷರು" ಇದರ ಬದಲಾಗಿ ಈ ಕೆಳಕಂಡಂತೆ ತಿದ್ದಿಕೊಂಡು ಓದಿಕೊಳ್ಳತಕ್ಕದ್ದು:–

5) ಫ್ಲ್ಯಾಗ್ ಆಫೀಸರ್ ಕಮಾಂಡಿಂಗ್–ಇನ್–ಚೀಫ್–ವೆಸ್ಟರನ್ ನೇವಲ್ ಕಮಾಂಡ್, ಮುಂಬೈ–400 001 – ಉಪಾಧ್ಯಕ್ಷರು

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಜಿ.ಆರ್. ಶ್ರೀನಿವಾಸರಾವ್

ಪಿ.ಆರ್. 2647 ಸರ್ಕಾರದ ಅಧೀನ ಕಾರ್ಯದರ್ಶಿ (ಪ್ರಭಾರ),

ಒಳಾಡಳಿತ ಇಲಾಖೆ, (ಪೊಲೀಸ್ ಸಹಾಯಕ ಸೇವೆಗಳು)

ಪ್ರಸ್ತಾವನೆ:

ಮೇಲೆ ಓದಲಾದ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ದಕ್ಷಿಣ ವಲಯ, ಬೆಂಗಳೂರು ರವರ ಪತ್ರದಲ್ಲಿ ರಾಮನಗರ ಜಿಲ್ಲೆ, ಬಿಡದಿ ಹೋಬಳಿ, ತಾಳಗುಪ್ಪ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ತಾಳಗುಪ್ಪ ಗ್ರಾಮದ ಸರ್ವೆ ನಂಬರ್‌ಗಳ ಜಮೀನುಗಳಿಗೆ ರಾಮನಗರದ ಹೆಚ್ಚುವರಿ ಸಿವಿಲ್ ನ್ಯಾಯಾಲಯವು (ಹಿರಿಯ ಶ್ರೇಣಿ) ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 12/11/1987
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 12/09/1990.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ರಾಮನಗರದ ಹೆಚ್ಚುವರಿ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣಗಳನ್ನು ದಾಖಲಿಸಿದ್ದು, ಈ ಪ್ರಕರಣಗಳನ್ನು ಸಿವಿಲ್ ನ್ಯಾಯಾಲಯವು ವಜಾಗೊಳಿಸಿದೆ. ಆದ್ದರಿಂದ ಭೂಮಾಲೀಕರು ಹೆಚ್ಚಿನ ಪರಿಹಾರ ಧನ್ಯಾಗಿ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಎಂಎಫ್‌ಎ 3775/2003ನ್ನು ದಾಖಲಿಸಿರುತ್ತಾರೆ. ಮಾನ್ಯ ಉಚ್ಚ ನ್ಯಾಯಾಲಯವು ಪ್ರತಿ ಎಕರೆಗೆ ರೂ.30,000/–ಗಳಂತೆ ಪರಿಹಾರ ಧನ ನಿಗದಿಪಡಿಸಿ ತೀರ್ಪು ನೀಡಿದೆ. ಈ ಎಂಎಫ್‌ಎ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಾನೂನು ಇಲಾಖೆಯು ಪತ್ರ ಸಂಖ್ಯೆ:ಲಾ 2152 ಎಲ್‌ಎಸ್‌ಪಿ 2007, ದಿನಾಂಕ 16/11/2007ರಲ್ಲಿ ಅಭಿಪ್ರಾಯ ನೀಡಿದೆ. ಪಾವತಿಸಬೇಕಾದ ಪರಿಹಾರಧನದ ಪ್ರಕರಣದ ವಿವರ ಕೆಳಕಂಡಂತಿದೆ:

ಕ್ರ. ಸಂ	ಎಲ್‌ಎಸಿ ಸಂಖ್ಯೆ	ಎಂಎಫ್‌ಎ ಸಂಖ್ಯೆ	ತಾಳಗುಪ್ಪ ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	25/91	3775/03	62, 69, 75	4–23 $^{1}/_{2}$	4,78,445–00
	ಒಟ್ಟು				**4,78,445–00**

*** ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಸನೀಇ 155 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 17ನೇ ನವೆಂಬರ್ 2009

ರಾಮನಗರ ಜಿಲ್ಲೆ, ಬಿಡದಿ ಹೋಬಳಿ ತಾಳಗುಪ್ಪ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ತಾಳಗುಪ್ಪ ಗ್ರಾಮಕ್ಕೆ ಸೇರಿದ ಪ್ರಸ್ತಾವನೆಯಲ್ಲಿ ನಮೂದಿಸಿರುವ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ.4,78,445–00ಗಳನ್ನು (ನಾಲ್ಕು ಲಕ್ಷದ ಎಪ್ಪತ್ತೆಂಟು ಸಾವಿರದ ನಾನೂರ ನಲವತ್ತೈದು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕ ಶೀರ್ಷಿಕೆ "4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು" ಅಡಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2624

ಕೆ. ಸುಧಾಕರ ಶೆಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ವಿಷಯ: ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕು ಚಿಕ್ಕಬೆಣಕಲ್ ಜಿನುಗು ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ಸಿವಿಲ್ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 29/07/09ರ ಪತ್ರ ಸಂಖ್ಯೆ:ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/ 2009–10/4513.

ಪ್ರಸ್ತಾವನೆ:

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರ ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕು ಚಿಕ್ಕಬೆಣಕಲ್ ಜಿನುಗು ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಚಿಕ್ಕಬೆಣಕಲ್ ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 22/09/05.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಮ ಘೋಷಿಸಿದ ದಿನಾಂಕ 15/07/08

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಗಂಗಾವತಿಯ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣವನ್ನು ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯು ಪತ್ರ ಸಂಖ್ಯೆ:ಆರ್‌ಡಿ 567 ಎಲ್‌ಸಿಜಿ 2009, ದಿನಾಂಕ 11/05/09ರಲ್ಲಿ ಅಭಿಪ್ರಾಯ ನೀಡಿದೆ.

ಸಿವಿಲ್ ನ್ಯಾಯಾಲಯವು ಹೆಚ್ಚಿನ ಪರಿಹಾರ ಧನಕ್ಕೆ ತೀರ್ಮ ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ:

ಕ್ರ. ಸಂ	ಎಲ್‌ಎಸಿ ಸಂಖ್ಯೆ	ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	2/09	62/ಬಿ, 62/ಬಿ1, 62/ಕೆ, 62/ಕೆ1	10–21	41,32,936–00

- **ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಸನೀಇ 126 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 6ನೇ ನವೆಂಬರ್ 2009

ಕೊಪ್ಪಳ ಜಿಲ್ಲೆ, ಗಂಗಾವತಿ ತಾಲ್ಲೂಕು ಚಿಕ್ಕಬೆಣಕಲ್ ಜಿನುಗು ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಚಿಕ್ಕಬೆಣಕಲ್ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ. ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ.41,32,936–00ಗಳನ್ನು (ನಲವತ್ತೊಂದು ಲಕ್ಷದ ಮೂವತ್ತೆರಡು ಸಾವಿರದ ಒಂಭೈನೂರ ಮೂವತ್ತಾರು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರ ದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2628

ಕೆ. ಸುಧಾಕರ ಶೆಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ವಿಷಯ: ಗದಗ್ ಜಿಲ್ಲೆ, ಮುಂಡರಗಿ ತಾಲ್ಲೂಕು ಮುಂಡವಾಡ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಜಮೀನುಗಳಿಗೆ ನ್ಯಾಯಾಲಯದ ಆದೇಶದಂತೆ ಹೆಚ್ಚಿನ ಪರಿಹಾರಧನ ಪಾವತಿಸುವ ಕುರಿತು.

ಓದಲಾಗಿದೆ: ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರ ದಿನಾಂಕ 17/01/09ರ ಪತ್ರ ಸಂಖ್ಯೆ:ಮುಇಂ/ಸನೀ(ಉ)ವ/ಬಿಜಾ/ಭೂಸ್ವಾಪ್ರ/ 2008–09/322.

ಪ್ರಸ್ತಾವನೆ:

ಮೇಲೆ ಓದಲಾದ ಬಿಜಾಪುರ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರ ಪತ್ರದಲ್ಲಿ ಗದಗ್ ಜಿಲ್ಲೆ, ಮುಂಡರಗಿ ತಾಲ್ಲೂಕು ಮುಂಡವಾಡ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾದ ಕೆರಳ್ಳಿ ಗ್ರಾಮದ ಜಮೀನುಗಳಿಗೆ ಎಲ್.ಎ.ಸಿ. ಪ್ರಕರಣದಲ್ಲಿ ನೀಡಿದ ತೀರ್ಪಿನ ಅನುಸಾರ ಹೆಚ್ಚಿನ ಪರಿಹಾರಧನ ಪಾವತಿಸಲು ರೂ.5,67,026–00ಗಳ ಅನುದಾನ ಬಿಡುಗಡೆ ಮಾಡುವಂತೆ ಕೋರಿದ್ದಾರೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿದ ಜಮೀನುಗಳ ಭೂಸ್ವಾಧೀನದ ಪ್ರಕ್ರಿಯೆಯ ವಿವರಗಳು ಈ ಕೆಳಕಂಡಂತಿದೆ:

- ಕರ್ನಾಟಕ ಭೂಸ್ವಾಧೀನ ಕಾಯ್ದೆಯ ಕಲಂ 4(1)ರಡಿ ಅಧಿಸೂಚನೆ ಹೊರಡಿಸಿದ ದಿನಾಂಕ 26/01/1984.
- ಕರ್ನಾಟಕ ಭೂಸ್ವಾಧೀನ ಕಾಯ್ದೆಯಡಿಯಲ್ಲಿ ಭೂಸ್ವಾಧೀನಾಧಿಕಾರಿಗಳು ಪರಿಹಾರ ಧನದ ಐತೀರ್ಪು ಘೋಷಿಸಿದ ದಿನಾಂಕ 11/04/1985.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳ ಭೂಮಾಲೀಕರು ಭೂಸ್ವಾಧೀನಾಧಿಕಾರಿಗಳ ಪರಿಹಾರ ಧನದ ಐತೀರ್ಪಿನಂತೆ ಹಣ ಪಡೆದು, ಹೆಚ್ಚಿನ ಪರಿಹಾರಧನಕ್ಕಾಗಿ ಭೂಸ್ವಾಧೀನ ಕಾಯ್ದೆ ಕಲಂ 18(1)ರಡಿ ಗದಗ್‌ನ ಸಿವಿಲ್ (ಹಿರಿಯ ಶ್ರೇಣಿ) ನ್ಯಾಯಾಲಯದಲ್ಲಿ ಭೂಸ್ವಾಧೀನ ಪ್ರಕರಣ ದಾಖಲಿಸಿದ್ದು, ಈ ಪ್ರಕರಣದಲ್ಲಿ ಸಿವಿಲ್ ನ್ಯಾಯಾಲಯವು ಪ್ರತಿ ಎಕರೆಗೆ ರೂ.13,000/–ಗಳಂತೆ ನಿಗದಿಪಡಿಸಿ ತೀರ್ಪು ನೀಡಿದೆ.

ಸಿವಿಲ್ ನ್ಯಾಯಾಲಯದ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸದಿರಲು ಕಂದಾಯ ಇಲಾಖೆಯ ಕಾನೂನು ಕೋಶವು ಅಭಿಪ್ರಾಯ ನೀಡಿದೆ. ಹೆಚ್ಚಿನ ಪರಿಹಾರ ಧನಕ್ಕೆ ತೀರ್ಪು ನೀಡಿರುವ ಪ್ರಕರಣಗಳ ವಿವರ ಕೆಳಕಂಡಂತಿದೆ:

ಕ್ರ. ಸಂ	ಎಲ್‌ಎಸಿ ಸಂಖ್ಯೆ	ಕೆರಳ್ಳಿ ಗ್ರಾಮದ ಸ.ನಂ.	ವಿಸ್ತೀರ್ಣ ಎ–ಗುಂ.	ಪರಿಹಾರ ಮೊತ್ತ ರೂ.ಗಳಲ್ಲಿ
1	203/03	14/1	8–00	5,67,026–00
	ಒಟ್ಟು			5,67,026–00

- **ಪರಿಹಾರ ಧನದ ಮೊತ್ತದಲ್ಲಿ ನ್ಯಾಯಾಲಯದ ವೆಚ್ಚ ಸಹ ಸೇರಿದೆ.**

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ:ಸನೀಇ 19 ಭೂಸ್ವಾಪ್ರ 2009, ಬೆಂಗಳೂರು, ದಿನಾಂಕ: 17ನೇ ನವೆಂಬರ್ 2009.

ಗದಗ್ ಜಿಲ್ಲೆ, ಮುಂಡರಗಿ ತಾಲ್ಲೂಕು ಮುಂಡವಾಡ ಸಣ್ಣ ನೀರಾವರಿ ಕೆರೆ ನಿರ್ಮಾಣಕ್ಕಾಗಿ ಸ್ವಾಧೀನಪಡಿಸಿಕೊಂಡ ಕೆರಳ್ಳಿ ಗ್ರಾಮಕ್ಕೆ ಸೇರಿದ ಸರ್ವೆ ನಂಬರ್‌ಗಳ ಜಮೀನುಗಳಿಗೆ ಸಿವಿಲ್ ನ್ಯಾಯಾಲಯವು ಎಲ್.ಎ.ಸಿ ಪ್ರಕರಣಗಳಲ್ಲಿ ನೀಡಿರುವ ತೀರ್ಪಿನಂತೆ ಹಾಗೂ ಭೂಸ್ವಾಧೀನ ಕಾಯ್ದೆಯಲ್ಲಿಯ ಸೂಚನೆಗಳಂತೆ ಲೆಕ್ಕಾಹಾಕಿದ ಪರಿಹಾರ ಧನ ಮೊತ್ತ ರೂ.5,67,026–00ಗಳನ್ನು (ಐದು ಲಕ್ಷದ ಅರವತ್ತೇಳು ಸಾವಿರದ ಇಪ್ಪತ್ತಾರು ರೂ.ಗಳು ಮಾತ್ರ) ಪಾವತಿಸಲು ಸರ್ಕಾರವು ಅನುಮೋದನೆ ನೀಡಿದೆ. ಹಣ ಪಾವತಿಗೆ ಮೊದಲು ಮತ್ತೊಮ್ಮೆ ಲೆಕ್ಕಾಚಾರ ತ:ಖ್ತೆಯನ್ನು ದೃಢೀಕರಿಸಿಕೊಂಡು ಪಾವತಿಸತಕ್ಕದ್ದು ಹಾಗೂ ಎರಡನೇ ಬಾರಿ ಪಾವತಿಯಾಗದಂತೆ ಎಚ್ಚರವಹಿಸತಕ್ಕದ್ದು.

ಈ ವೆಚ್ಚವನ್ನು 2009–10ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ 4702–00–800–1–00–ಭೂಸ್ವಾಧೀನ ವೆಚ್ಚಗಳು ಮತ್ತು ಕ್ಲೇಂಗಳು–ಇತ್ಯರ್ಥ 132 ಬಂಡವಾಳ ವೆಚ್ಚಗಳು ಅಡಿಯಲ್ಲಿ ಸಣ್ಣ ನೀರಾವರಿ ಇಲಾಖೆಗೆ ಒದಗಿಸಿರುವ ಅನುದಾನದಿಂದ ಭರಿಸಿಕೊಳ್ಳತಕ್ಕದ್ದು.

ಭೂಸ್ವಾಧೀನಕ್ಕೊಳಪಟ್ಟ ಜಮೀನುಗಳು ಇನ್ನೂ ಸಣ್ಣ ನೀರಾವರಿ ಇಲಾಖೆಯ ಹೆಸರಿಗೆ ವರ್ಗಾವಣೆಯಾಗದಿದ್ದಲ್ಲಿ, ಕೂಡಲೇ ಸಂಬಂಧಿಸಿದ ಸಣ್ಣ ನೀರಾವರಿ ಅಧಿಕಾರಿಗಳು ವರ್ಗಾವಣೆ ಬಗ್ಗೆ ಕ್ರಮ ಕೈಗೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2008, ದಿನಾಂಕ 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರ ದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 2630

ಕೆ. ಸುಧಾಕರ ಶೆಟ್ಟಿ
ಸರ್ಕಾರದ ಅಧೀನ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)